# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 269 |
| 2 | ಸದಸ್ಯರ ಹೆಸರು | : | ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 06-07-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿನ ಅಂಡರ್ ಪಾಸ್‌ಗಳ ನಿರ್ವಹಣೆಯಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ನಿರ್ಲಕ್ಷ್ಯ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇರುವ ಅಂಡರ್‌ಪಾಸ್‌ಗಳ ನಿರ್ವಹಣೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನಿರ್ಲಕ್ಷ್ಯ ವಹಿಸಿರುವುದು ಕಂಡು ಬಂದಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಸಂಭವಿಸಿರುವ ಅನಾಹುತಗಳಿಗೆ ಸಂಬಂಧಿಸಿದಂತೆ ಬೆಂಗಳೂರು ಮಹಾನಗರ ಪಾಲಿಕೆ ಕೈಗೊಂಡಿರುವ ಕ್ರಮಗಳೇನು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನಗರದಲ್ಲಿನ ಕೆಳಸೇತುವೆಗಳ ನಿರ್ವಹಣೆಗಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br>• ಬೆಂಗಳೂರು ನಗರದಲ್ಲಿನ ಕೆಳಸೇತುವೆಗಳನ್ನು ನಿರ್ಧಿಷ್ಟವಾಗಿ ಮತ್ತು ಪರಿಣಾಮಕಾರಿಯಾಗಿ ನಿರ್ವಹಣೆ ಮಾಡಲು ಹಾಗೂ ಅಗತ್ಯಕ್ಕೆ ತಕ್ಕಂತೆ ಹೆಚ್ಚುವರಿ ದುರಸ್ಥಿ ಕಾರ್ಯವನ್ನು ಕೈಗೆತ್ತಿಕೊಳ್ಳುವ ವ್ಯವಸ್ಥೆ ಜಾರಿಯಲ್ಲಿರುತ್ತದೆ.<br>• ನಗರದಲ್ಲಿರುವ ಪ್ರತಿಯೊಂದು ಅಂಡರ್‌ಪಾಸ್‌ಗಳಲ್ಲಿ ಕ್ಯಾಮರಾಗಳನ್ನು ಅಳವಡಿಸಿ ಸದರಿ ಕ್ಯಾಮರಾಗಳನ್ನು ಪೊಲೀಸ್ ಠಾಣೆಗೆ ಮತ್ತು ಬಿಬಿಎಂಪಿಯ ನಿಯಂತ್ರಣ ಕೊಠಡಿಗೆ ಲಿಂಕ್ ಮಾಡಲು ಉದ್ದೇಶಿಸಲಾಗಿದೆ.<br>• ನಗರದಲ್ಲಿರುವ ಪ್ರತಿಯೊಂದು ಅಂಡರ್‌ಪಾಸ್‌ಗಳನ್ನು ನಿರ್ವಹಣೆ ಮಾಡಲು ಆಯಾ ವಿಭಾಗಕ್ಕೆ ಸಂಬಂಧಿಸಿದ ಕಾರ್ಯಪಾಲಕ ಅಭಿಯಂತರರ ನೇತೃತ್ವದಲ್ಲಿ ತಂಡಗಳನ್ನು ರಚಿಸಿ ನಿರ್ಧಿಷ್ಟವಾದ ಜವಾಬ್ದಾರಿಯನ್ನು ನೀಡಲಾಗಿರುತ್ತದೆ.<br>• 2023-24ನೇ ಸಾಲಿನಲ್ಲಿ ಅಂಡರ್‌ಪಾಸ್ ಮತ್ತು ಮೇಲುಸೇತುವೆಗಳ ನಿರ್ವಹಣೆಗಾಗಿ ರೂ.20.00 ಕೋಟಿಗಳನ್ನು ಮೀಸಲಿಡಲಾಗಿದ್ದು, ಸದರಿ ಮೊತ್ತದಲ್ಲಿ ಹೆಚ್ಚುವರಿಯಾಗಿ ಒದಗಿಸಬೇಕಾದ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. |

. . .2/-

| | | |
|---|---|---|
| | | • ಕೆಲವೊಂದು ಅಂಡರ್‌ಪಾಸ್‌ಗಳಿಂದ ಮಳೆ ನೀರು ತ್ವರಿತವಾಗಿ ಹೊರ ಹೋಗಲು ಕಷ್ಟ ಸಾಧ್ಯವಾಗಿರುವುದರಿಂದ (ಗಾಲ್ಫ್ ಕೋರ್ಸ್ ಮತ್ತು ಕಾವೇರಿ ಚಿತ್ರಮಂದಿರ ಅಂಡರ್‌ಪಾಸ್‌ಗಳಿಗೆ) ದೆಹಲಿ ಮಾದರಿಯಲ್ಲಿ ಮೇಲ್ಚಾವಣಿಯನ್ನು ಒದಗಿಸಲಾಗುತ್ತದೆ.<br>• ಅಂಡರ್‌ಪಾಸ್ ತಳಭಾಗದಲ್ಲಿ ನಿರ್ಮಿಸಲಾಗಿರುವ ಚರಂಡಿಗಳ ಮೇಲಿನ ಸ್ಥಿರವಾದ (fixed) ಮುಚ್ಚಳವನ್ನು ಮಾರ್ಪಡಿಸಿ ತೆರೆಯಬಹುದಾದ (Openable) ಮಾದರಿಯನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿರುತ್ತದೆ. |
| ಇ) | ಅನಾಹುತಗಳಲ್ಲಿ ಬಲಿಯಾದವರ ಸಂಖ್ಯೆ ಎಷ್ಟು; ಇವರಿಗೆ ನೀಡಲಾದ ಪರಿಹಾರಗಳೇನು? | ಇಂತಹ ಒಂದು ದುರ್ಘಟನೆಯಲ್ಲಿ ಒಬ್ಬರು ವ್ಯಕ್ತಿಯು ಮೃತರಾಗಿರುತ್ತಾರೆ. ಈ ಮೃತ ವ್ಯಕ್ತಿಯ ಕುಟುಂಬಕ್ಕೆ ರೂ.5.00 ಲಕ್ಷಗಳನ್ನು ಪರಿಹಾರವಾಗಿ ನೀಡಲಾಗಿರುತ್ತದೆ. |

**ಸಂಖ್ಯೆ: ನಅಇ 268 ಎಂಎನ್‌ವೈ 2023 (ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ